RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ


| | | |
|---|---|---|
| ಭಾಗ– IV-A | ಬೆಂಗಳೂರು, ಶುಕ್ರವಾರ, ನವೆಂಬರ್ ೭, ೨೦೧೪ (ಕಾರ್ತೀಕ ೧೬, ಶಕ ವರ್ಷ ೧೯೩೬) | ನಂ. ೬೭೫ |
| **Part– IV-A** | **Bangalore, Friday, November 7, 2014 (Karthika 16, Shaka Varsha 1936)** | **No. 675** |


ಶಿಕ್ಷಣ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಇಡಿ 300 ಡಿಸಿಇ 2013(ಭಾ–3), ಬೆಂಗಳೂರು, ದಿನಾಂಕ: 06–11–2014**

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಭರ್ತಿ ಮಾಡಲು ಕರ್ನಾಟಕ ಶಿಕ್ಷಣ ಇಲಾಖಾ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ) ನಿಯಮಗಳು 2014 ರನ್ನು ದಿನಾಂಕ:25–10–2014 ರಂದು ಹೊರಡಿಸಲಾಗಿದ್ದು, ಸದರಿ ನಿಯಮದ ನಿಯಮ 2(ಎಫ್)ರಲ್ಲಿ ಆಯ್ಕೆ ಪ್ರಕ್ರಿಯೆಯನ್ನು ನಡೆಸಲು ಆಯ್ಕೆ ಪ್ರಾಧಿಕಾರವು ಕರ್ನಾಟಕ ಲೋಕ ಸೇವಾ ಆಯೋಗ ಅಥವಾ ಇತರೆ ನಿಗದಿತ ಸಂಸ್ಥೆ ಎಂದು ತಿಳಿಸಲಾಗಿದೆ.

ಮುಂದುವರೆದು, ಕರ್ನಾಟಕ ಲೋಕ ಸೇವಾ ಆಯೋಗ (ಸಮಾಲೋಚನೆ) ವಿನಿಮಯಗಳು, 2000ರ ಅನುಬಂಧ–2ಕ್ಕೆ ದಿನಾಂಕ:08–04–2002ರ ಅಧಿಕೃತ ಜ್ಞಾಪನ ಸಂಖ್ಯೆ:ಡಿಪಿಎಆರ್ 03 ಎಸ್‌ಸಿಸಿ 2002ರಲ್ಲಿ ಮಾಡಲಾದ ತಿದ್ದುಪಡಿಯ ಹಿನ್ನೆಲೆಯಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿಯನ್ನು ಹೊರತುಪಡಿಸಿ, ಶಿಸ್ತು ಪ್ರಕರಣಗಳಿಗೆ ಹಾಗೂ ಇನ್ನಿತರ ಸೇವಾ ವಿಷಯಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಲೋಕಸೇವಾ ಆಯೋಗದೊಡನೆ ಸಮಾಲೋಚನೆ ನಡೆಸುವುದು ಅವಶ್ಯಕವಿರುತ್ತದೆ.

ಆದುದರಿಂದ, ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ 1298 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡುವ ಸಲುವಾಗಿ ಆಯ್ಕೆ ಪ್ರಕ್ರಿಯೆಯನ್ನು ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವನ್ನು ಆಯ್ಕೆ ಪ್ರಾಧಿಕಾರವನ್ನಾಗಿ ನಿಗದಿಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಶೇಖರ

ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)

ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ)

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು (ಪಿ.ಆ) (50 ಪ್ರತಿಗಳು)